## ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560012

ಸಂಖ್ಯೆ:ಪಿಯು/ಸಿಬ್ಬಂದಿ/ಸಿಆರ್-02/007/ಎನ್‌ಓಸಿ/2018-19 ದಿನಾಂಕ: 15-10-2018

### ಜ್ಞಾಪನ

**ವಿಷಯ:**- ಕೇಂದ್ರ/ರಾಜ್ಯ ಸರ್ಕಾರ, ವಿಶ್ವವಿದ್ಯಾಲಯ ಹಾಗೂ ಇತರೆ ಹುದ್ದೆಗಳಿಗೆ ಮತ್ತು ಕೆ.ಸೆಟ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**- ಜಿಲ್ಲಾ ಉಪನಿರ್ದೇಶಕರು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗದವರ ಪತ್ರಗಳು.

****

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ,ಉಪನಿರ್ದೇಶಕರುಗಳ ಕಛೇರಿ ಹಾಗೂ ನಿರ್ದೇಶಕರ ಕಛೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರು ರಾಜ್ಯ /ಕೇಂದ್ರ ಸರ್ಕಾರದ ಇತರೆ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರ ಮುಖೇನ ಮನವಿ ಪತ್ರಗಳನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಈ ಕೆಳಕಂಡ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಹೆಸರು ಮತ್ತು ಕಾಲೇಜು ವಿಳಾಸ ಶ್ರೀಮತಿ/ಶ್ರೀ/ಕುಮಾರಿ | ಅನುಮತಿ ಕೋರಲಾದ ಹುದ್ದೆ |
|---|---|---|
| 1. | ಶ್ರೀ ಭೂಷಣ ಭುಜಂಗ<br>ಭೌತಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಶಿಗ್ಗಾಂವ, ಹಾವೇರಿ ಜಿಲ್ಲೆ | ವಿಜಯ ಮಹಾಂತೇಶ ಕೃಪಾಪೋಷಿತ ಎಸ್ ಆರ್ ವಸ್ತ್ರದ ಕಲಾ,ವಿಜ್ಞಾನ ಹಾಗೂ ವಿಜಯ ಶಂಕರಪ್ಪ ವಾಣಿಜ್ಯ ಮಹಾವಿದ್ಯಾಲಯ,ಹುನಗುಂದ ರವರು ಕರೆದ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು |

ಷರತ್ತುಗಳು:

1. ಸದರಿಯವರು ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು.
2. ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
3. ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
4. ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
5. ಸದರಿಯವರು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

15/10/18

ಜಂಟಿ ನಿರ್ದೇಶಕರು(ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1.ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2.ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿ ಇ, ಬೆಂಗಳೂರು.
3.ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ ಕಛೇರಿ ಪ್ರತಿ.